ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 16–12–2019

## ಪತ್ರಿಕಾ ಪ್ರಕಟಣೆ

# ರಾಷ್ಟ್ರೀಯ ಹಸಿರು ಪಡೆಯ ಸಮ್ಮೇಳನ

ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ)

ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿರುವ ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಗೊಜನೂರು ಸರ್ಕಾರಿ ಪ್ರೌಢಶಾಲೆಯು ದಿನಾಂಕ 21–12–2019 ರಿಂದ 22–12–2019 ರವರೆಗೆ ಗುಜರಾತಿನ ಕೆವಡಿಯಲ್ಲಿ ರಾಷ್ಟ್ರೀಯ ಮಟ್ಟದ ರಾಷ್ಟ್ರೀಯ ಹಸಿರು ಪಡೆಯ ಸಮ್ಮೇಳನದಲ್ಲಿ ಕರ್ನಾಟಕವನ್ನು ಪ್ರತಿನಿಧಿಸುತ್ತಿದೆ. ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಆದೇಶದಂತೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ರಾಜ್ಯದ 14,132 ಶಾಲೆಗಳಲ್ಲಿ ರಾಷ್ಟ್ರೀಯ ಹಸಿರು ಪಡೆಯ ಯೋಜನೆಯಡಿಯಲ್ಲಿ ಪರಿಸರ ಕೂಟ ಸ್ಥಾಪನೆಯಾಗಿದ್ದು ದೇಶದಲ್ಲಿ ಒಂದು ಲಕ್ಷಕ್ಕೂ ಅಧಿಕ ಶಾಲೆಗಳಲ್ಲಿ ಈ ಯೋಜನೆಯಡಿ ಪರಿಸರ ಕೂಟಗಳು ಸ್ಥಾಪನೆಯಾಗಿರುತ್ತದೆ.

ಕರ್ನಾಟಕದಲ್ಲಿ ರಾಷ್ಟ್ರೀಯ ಹಸಿರು ಪಡೆಯ ಯೋಜನೆಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು http://ngc.karnataka.gov.in ನಲ್ಲಿ ಪಡೆಯಬಹುದು. ಗೊಜನೂರು ಪ್ರೌಢಶಾಲೆಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು http://www.ghsgojanur.com ನಲ್ಲಿ ಪಡೆಯಬಹುದು. ಶಾಲೆಯ ಪರಿಸರ ಚಟುವಟಿಕೆಗಳಿಗೆ ಸಂಬಂಧಿಸಿದಂತ ಹೆಚ್ಚಿನ ಮಾಹಿತಿಗಾಗಿ ಈ ಕೆಳಕಂಡವರನ್ನು ಸಂಪರ್ಕಿಸಬಹುದು.

ರವಿ ಬೆಂಚಳ್ಳಿ, ಮುಖ್ಯೋಪಾಧ್ಯಾಯರು 9448893868 ravibenchalli@gmail.com ಶ್ರೀಮತಿ ಸವಿತಾ ಯಾಳಗಿ, ಇಕೋಕ್ಲಬ್, ಶಿಕ್ಷಕರು 951476845 savitahp17@gmail.com ಪ್ರಶಸ್ತಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ವಿಶಾಂತ್ ಯಾದವ್ 9555772733 vishant.yadav89@gov.in ಇವರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಶೀರ್ಷಿಕೆ :

**ಕರ್ನಾಟಕ ಮಾಹಿತಿ ಆಯೋಗದ ನೂತನ ಆಯುಕ್ತರಾಗಿ ಇಂದು ಶ್ರೀಮತಿ ಕೆ.ಆರ್. ಗೀತಾ ಅವರು ರಾಜಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ವಜೂಭಾಯಿ ವಾಲಾ ಅವರು ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.**

## ಅಖಿಲ ಭಾರತ ಶಾಸಕಾಂಗ ಸಂಸ್ಥೆಗಳ ಪೀಠಾಸೀನಾಧಿಕಾರಿ ಹಾಗೂ ಕಾರ್ಯದರ್ಶಿಗಳ ಸಮ್ಮೇಳನ

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ)**

**79 ನೇ ಅಖಿಲ ಭಾರತ ಶಾಸಕಾಂಗ ಸಂಸ್ಥೆಗಳ ಪೀಠಾಸೀನಾಧಿಕಾರಿ ಹಾಗೂ ಕಾರ್ಯದರ್ಶಿಗಳ ಸಮ್ಮೇಳನವು ಡಿಸೆಂಬರ್ 17 ರಿಂದ 19 ರವರೆಗೆ ಉತ್ತರಖಂಡದ ಡೆಹರಾಡೂನ್‌ನಲ್ಲಿ ನಡೆಯಲಿದ್ದು, ಸದರಿ ಸಮ್ಮೇಳನದಲ್ಲಿ ಕರ್ನಾಟಕ ವಿಧಾನಸಭೆಯ ಮಾನ್ಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಶ್ರೀಮತಿ ಎಂ. ಕೆ. ವಿಶಾಲಾಕ್ಷಿ ಅವರು ಭಾಗವಹಿಸಲಿರುವರು. ಸಭಾಧ್ಯಕ್ಷರು ಡಿಸೆಂಬರ್ 21 ರಂದು ಬೆಂಗಳೂರಿಗೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.**

## *ಪ್ರಶಸ್ತಿ ಪ್ರದಾನ ಸಮಾರಂಭ – 2019*

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ**

ಬಿ. ಮಾರಪ್ಪ ಸ್ಮಾರಕ ಟ್ರಸ್ಟ್ ಸಂಸ್ಥೆ (ರಿ) ಬೆಂಗಳೂರು ಮತ್ತು ಕರ್ನಾಟಕ ಅರಣ್ಯ ಇಲಾಖೆ ವತಿಯಿಂದ ವನ್ಯಜೀವಿ ಸಂರಕ್ಷಣೆ ಹಾಗೂ ಅರಣ್ಯ ರಕ್ಷಣೆಯಲ್ಲಿ ವಿಶೇಷ ಸೇವೆ ಸಲ್ಲಿಸಿರುವ ಅರಣ್ಯ ನೌಕರರುಗಳಿಗೆ 2019ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಡಿಸೆಂಬರ್ 21 ರ ಶನಿವಾರ ಮಧ್ಯಾಹ್ನ 3.30 ಗಂಟೆಗೆ ಮಲ್ಲೇಶ್ವರಂನಲ್ಲಿರುವ ಅರಣ್ಯ ಭವನದ ಸಮ್ಮೇಳನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಪ್ರಶಸ್ತಿ ಪ್ರದಾನವನ್ನು ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವಥ್ ನಾರಾಯಣ ಅವರು ನೆರವೇರಿಸಲಿದ್ದಾರೆ.

ಅರಣ್ಯ, ಪರಿಸರ ಮತ್ತು ಜೀವಿ ಪರಿಸ್ಥಿತಿ ಇಲಾಖೆಯ ಸಚಿವ ಸಿ. ಸಿ. ಪಾಟೀಲ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಹಾಗೂ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಸಂದೀಪ್ ದವೆ ಅವರು ವಿಶೇಷ ಅತಿಥಿಗಳಾಗಿ ಪಾಲ್ಗೊಳ್ಳುವರು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ  ಪುನಟಿ ಶ್ರೀಧರ್, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ)  ಸಂಜಯ್ ಮೋಹನ್ ಹಾಗೂ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ)  ಅಜಯ್ ಮಿಶ್ರ ಅವರು ಉಪಸ್ಥಿತರಿರುವರು.

ಸಮಾರಂಭ ಅಧ್ಯಕ್ಷತೆಯನ್ನು ಬಿ. ಮಾರಪ್ಪ ಸ್ಮಾರಕ ಟ್ರಸ್ಟ್ ಅಧ್ಯಕ್ಷ  ಆರ್. ಎಮ್. ಪಾಲಣ್ಣ ಅವರು ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## <u>ಸಚಿವರ ಪ್ರವಾಸ</u>

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಹಾಗೂ ಕಾರ್ಮಿಕ ಸಚಿವ ಸುರೇಶ್ ಕುಮಾರ್ ಅವರು ಡಿಸೆಂಬರ್ 17 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದೇ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಪ್ರವಾಸ

**ಬೆಂಗಳೂರು, ಡಿಸೆಂಬರ್ 16 (ಕರ್ನಾಟಕ ವಾರ್ತೆ**

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ಡಿಸೆಂಬರ್ 17 ರಿಂದ 19 ರವರೆಗೆ ವಿಜಯಪುರ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಲಿದೆ. ಸಮಿತಿಯು ಡಿಸೆಂಬರ್ 20 ರಂದು ಬೆಂಗಳೂರಿಗೆ ಹಿಂತಿರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.